ಮರುರೂಪಿಸುವ ರೀತಿ ಯಾವುದು ಎಂದು ಯಾರೂ ಯೋಚಿಸುತ್ತಿಲ್ಲ.

2011ರ ಜನಗಣತಿ ಇದೀಗ ಬಿಡುಗಡೆ ಆಗಿದೆ. ಇದರಲ್ಲಿರುವ ಭಾಷಾ ಸಂಬಂಧಿಯಾದ ಮಾಹಿತಿಗಳನ್ನು ಯಾವ ಕನ್ನಡ ಪರ ಸಂಸ್ಥೆಗಳು ಗಮನಿಸಿವೆ? ಉದಾಹರಣೆಗೆ ಕನ್ನಡ ಮಾತಾಡುವವರ ಸಂಖ್ಯೆಯಲ್ಲಿ ಕಂಡು ಬರುವ ಇಳಿತವನ್ನು ಗಮನಿಸಬೇಕು. ಕಳೆದ 40 ವರ್ಷಗಳಲ್ಲಿ ಕನ್ನಡ ಮಾತಾಡುವವರ ಸಂಖ್ಯೆಯಲ್ಲಿ ಆದ ಏರಿಕೆ ಕೇವಲ ಶೇ 3.75. ಆದರೆ ಹಿಂದಿಯಲ್ಲಿ ಇದು ಶೇ 42 ಆಗಿದ್ದರೆ, ತಮಿಳಿನಲ್ಲಿ ಶೇ 6 ಆಗಿದೆ. ಆಶ್ಚರ್ಯವೆಂದರೆ ಇಷ್ಟೊಂದು ದೊಡ್ಡ ಸಮಸ್ಯೆಯಿದ್ದರೂ ಯಾರೂ ಅದರ ಕಡೆಗೆ ಗಂಭೀರವಾಗಿ ಗಮನ ಕೊಡುತ್ತಿಲ್ಲ. ಅಕಾಡೆಮಿ, ಪರಿಷತ್ತುಗಳಲ್ಲಿ ಕೆಲಸ ಮಾಡುತ್ತಿರುವ ಎಷ್ಟು ಜನರಿಗೆ ಭಾಷೆಯ ಬಗ್ಗೆ ಸರಿಯಾದ ತಿಳಿವಳಿಕೆ ಇದೆ ಎಂಬುದನ್ನು ಗಮನಿಸಿದರೆ ಬೇಸರವಾಗುತ್ತದೆ.

◆ **ಕನ್ನಡದಲ್ಲಿ ಸಂಶೋಧನೆಗಳು ಹೇಗೆ ಆಗುತ್ತಿವೆ? ನೀವು ಗುರುತಿಸುವ, ತುಂಬ ಉಪಯುಕ್ತ ಅನ್ನಿಸುವ ಒಂದೆರಡು ಸಂಶೋಧನೆಗಳ ಬಗ್ಗೆ ಹೇಳಿ.**

ಕರ್ನಾಟಕದ ವಿಶ್ವವಿದ್ಯಾಲಯಗಳಲ್ಲಿ ನಡೆಯುತ್ತಿರುವ ಇವತ್ತಿನ ಸಂಶೋಧನೆಗಳಿಂದ (ಕೆಲವೇ ಕೆಲವು ಅಪವಾದಗಳನ್ನು ಹೊರತು ಪಡಿಸಿದರೆ) ಯಾರಿಗೂ ಪ್ರಯೋಜನವಿಲ್ಲ. ಕನ್ನಡ ಸಂಶೋಧನೆಯ ಭಾಷೆಯು ಜಡವಾಗಿದೆ. ಸಂಶೋಧನಾ ವಿಧಾನಗಳು ವರ್ತಮಾನದ ಅಗತ್ಯಗಳಿಗೆ ಪೂರಕವಾಗಿ ತನ್ನನ್ನು ಹೊಸದುಗೊಳಿಸಿಕೊಳ್ಳದೆ ನಿರ್ಜೀವವಾಗಿವೆ. ಸಂಶೋಧನೆಗೆ ಆಯ್ದುಕೊಳ್ಳುವ ವಸ್ತುಗಳು ಯಾವುದೇ ಸವಾಲುಗಳನ್ನು ಸ್ವೀಕರಿಸದೆ ಸರಳವಾಗಿದ್ದು ನಮ್ಮ ಅರಿವಿನ ವಲಯಗಳನ್ನು ವಿಸ್ತರಿಸುತ್ತಿಲ್ಲ. ಎಲ್ಲಕ್ಕಿಂತ ಮಿಗಿಲಾಗಿ ಸಂಶೋಧನೆಗಳು ಪತನಮುಖಿಯಾಗುತ್ತಿರುವುದರ ಬಗ್ಗೆ ಗಂಭೀರವಾದ ಚರ್ಚೆಗಳೂ ನಡೆಯುತ್ತಿಲ್ಲ. ನನಗೆ ಮೌಲ್ಯಮಾಪನಕ್ಕೆ ಬರುವ ಪಿಎಚ್.ಡಿ. ಮಹಾಪ್ರಬಂಧಗಳಲ್ಲಿ ಸಾಮಾನ್ಯವಾಗಿ ಪುಟಕ್ಕೆ ಹತ್ತರಂತೆ ಅಕ್ಷರ ತಪ್ಪುಗಳಿರುತ್ತವೆ. ಲೇಖಕರ ಹೆಸರುಗಳನ್ನೇ ಸರಿಯಾಗಿ ಬರೆದಿರುವುದಿಲ್ಲ. ಉಲ್ಲೇಖಗಳನ್ನು ಹೇಗೆ ಮಾಡಬೇಕೆಂಬ ತಿಳಿವಳಿಕೆ ಇರುವುದಿಲ್ಲ. ಆರಿಸಿಕೊಂಡ ವಿಷಯಕ್ಕೆ ಸಂಬಂಧಿಸಿದಂತೆ ನಡೆದ ಅಧ್ಯಯನಗಳ ಓದು ಮತ್ತು ಅವುಗಳ ವಿಮರ್ಶಾತ್ಮಕ ವಿಶ್ಲೇಷಣೆ ಬಹುಮಟ್ಟಿಗೆ ಕಾಣೆಯಾಗಿರುತ್ತವೆ. ಪಾರಿಭಾಷಿಕ ಪದಗಳ ಬಳಕೆಯಲ್ಲಿ ಅಸ್ಪಷ್ಟತೆ ಹಾಗೂ ಗೊಂದಲ ಎಲ್ಲೆಂದರಲ್ಲಿ ಕಂಡು ಬರುತ್ತದೆ. ಅತ್ಯಂತ ಅವೈಜ್ಞಾನಿಕವಾದ ರೀತಿಯಲ್ಲಿ ಆಕರ ಸೂಚಿಗಳನ್ನು ಕೊಡಲಾಗುತ್ತದೆ. ಇವಕ್ಕೆಲ್ಲ ಕಲಶವಿಟ್ಟಂತೆ ಸಂಶೋಧನಾ ವಿದ್ಯಾರ್ಥಿಗಳಲ್ಲಿ ಕಂಡು ಬರುವ ಅಸಡ್ಡೆ, ಆಲಸ್ಯ ಮತ್ತು ದುರಹಂಕಾರ ಯಾವುದೇ ಬಗೆಯ ಗಂಭೀರ ಚರ್ಚೆಗಳನ್ನು ಕೂಡಾ ಸಾಧ್ಯಮಾಡುತ್ತಿಲ್ಲ. ನಮ್ಮ ಶಿಕ್ಷಣ ಕ್ರಮದ ಯಾವ ಹಂತದಲ್ಲೂ ಸಂಶೋಧನೆಯನ್ನು ಪ್ರೋತ್ಸಾಹಿಸುವ ಪಠ್ಯಕ್ರಮವಿಲ್ಲ. ಈ ವಿಷಯದಲ್ಲಿ ಸಂಶೋಧನಾ ವಿದ್ಯಾರ್ಥಿಗಳಿಗೆ ಸರಿಯಾಗಿ ಮಾರ್ಗದರ್ಶನ ಮಾಡಬಲ್ಲ ಯೋಗ್ಯತೆ ಇರುವ ಅಧ್ಯಾಪಕರ ಸಂಖ್ಯೆಯೂ ಕ್ಷೀಣಿಸುತ್ತಿದೆ. ತಾವು ಕೆಲಸ ಮಾಡಬಯಸುವ ಕ್ಷೇತ್ರದಲ್ಲಿ ಯಾವ ಬಗೆಯ ಸಂಶೋಧನೆಗಳು ನಡೆದಿವೆ ಮತ್ತು ನಡೆಯುತ್ತಿವೆ, ನಮ್ಮ ಇಂದಿನ ತುರ್ತು ಅಗತ್ಯಗಳೇನು? ಎಂಬುದನ್ನು ವಿಸ್ತಾರವಾದ ಓದಿನ ಮೂಲಕ ಗ್ರಹಿಸಿ ಅದನ್ನು ತನ್ನ ಸಂಶೋಧನಾ ವಿದ್ಯಾರ್ಥಿಗೆ ಸಮರ್ಥವಾಗಿ ವಿವರಿಸಿ ಹೇಳಬಲ್ಲ ಅಧ್ಯಾಪಕರ ಸಂಖ್ಯೆ ಇವತ್ತು ಬೆರಳೆಣಿಕೆಯಲ್ಲಿದೆ. ಈ ನಡುವೆ ಅಧ್ಯಾಪಕರ ನಡುವಣ ಪರಸ್ಪರ ಸಂಬಂಧಗಳು ಎಷ್ಟು ಕುಸಿದು ಹೋಗಿವೆಯೆಂದರೆ ಸಮಾನಾಸಕ್ತಿಯ ವಿದ್ವಾಂಸರ ಜೊತೆಗೆ ಕೂಡಾ ಯಾವುದೇ ಬಗೆಯ ಅರ್ಥಪೂರ್ಣವಾದ ಸಂವಾದಗಳೂ ನಡೆಯುತ್ತಿಲ್ಲ. ತಮ್ಮ ವಿಶ್ವವಿದ್ಯಾಲಯದ ಪರಿಧಿಗಳನ್ನು ವಿಸ್ತರಿಸಿಕೊಂಡು ಬೇರೆಡೆಗೆ ಇರುವ ಸಂಶೋಧನಾ ಸಂಸ್ಥೆಗಳಿಗೆ ಭೇಟಿ ನೀಡುವ